## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಎಂ.ಹೆಚ್ ತಿಪ್ಪೇಸ್ವಾಮಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಬೆಂಗಳೂರು ಉತ್ತರ, ಬೆಂಗಳೂರು ಜಿಲ್ಲೆ ಪ್ರಸ್ತುತ ನಿವೃತ್ತ ಇವರ ವಿರುದ್ಧದ ಇಲಾಖಾ ವಿಚಾರಣೆ ನಡೆಸಲು ಪ್ರಕರಣವನ್ನು ಲೋಕಾಯುಕ್ತರಿಗೆ ವಹಿಸಿದ್ದ ಆದೇಶವನ್ನು ಕರ್ನಾಟಕ ಉಚ್ಚ ನ್ಯಾಯಾಲಯದ ರಿಟ್ ಅರ್ಜಿ ಸಂಖ್ಯೆ: 9467/2021ರ ತೀರ್ಪಿನನ್ವಯ ಹಿಂಪಡೆಯುವ ಬಗ್ಗೆ.

**ಓದಲಾಗಿದೆ:**

1. ಅಪರ ನಿಬಂಧಕರು, ವಿಚಾರಣೆಗಳು-10, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಅರೆ ಸರ್ಕಾರಿ ಪತ್ರ ಸಂಖ್ಯೆ: Compt/Uplok/BCD/659/2009/ARE-10, ದಿನಾಂಕ: 19.12.2013.
2. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 57 ವಿಸೇಬಿ 2014, ದಿನಾಂಕ: 24.02.2014.
3. ಕರ್ನಾಟಕ ಆಡಳಿತ ನ್ಯಾಯಮಂಡಳಿಯ ಅರ್ಜಿ ಸಂಖ್ಯೆ:1856/2014ರಲ್ಲಿ ದಿ:20.03.2019ರಂದು ನೀಡಿರುವ ಆದೇಶ.
4. ರಿಟ್ ಅರ್ಜಿ ಸಂಖ್ಯೆ:9467/2021ರಲ್ಲಿ ದಿ:29.06.2021ರ ಆದೇಶ.

**ಪ್ರಸ್ತಾವನೆ:-**

ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಪ್ರಸ್ತಾವನೆಯೊಂದಿಗೆ ಮಾನ್ಯ ಉಪ ಲೋಕಾಯುಕ್ತರವರು ಕರ್ನಾಟಕ ಲೋಕಾಯುಕ್ತ ಕಾಯ್ದೆ, 1984ರ ಕಲಂ 12 (3) ರಡಿಯಲ್ಲಿ ಸಲ್ಲಿಸಿರುವ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿ, ಬೆಂಗಳೂರು ಉತ್ತರ ತಾಲ್ಲೂಕು ಬಾಗಲೂರು ಗ್ರಾಮ ಪಂಚಾಯಿತಿ ದಿನಾಂಕ: 07.03.2008ರ ಸಭಾ ನಡವಳಿಯನ್ನು ನಕಲು ಮಾಡಿ ಗ್ರಾಮ ಪಂಚಾಯಿತಿಯ ಅಧ್ಯಕ್ಷರು ಮತ್ತು ಕಾರ್ಯದರ್ಶಿಗಳ ನಕಲಿ ಸಹಿ ಮಾಡಿ ಸದರಿ ಗ್ರಾಮ ಪಂಚಾಯಿತಿಯ ಸರ್ವೆ ನಂ. 177ರಲ್ಲಿನ ಸರ್ಕಾರದ ಜಮೀನನ್ನು ಗ್ರಾಮ ಪಂಚಾಯಿತಿಯ ಅನುಮತಿ ಪಡೆಯದೇ ನಕಲು ನಡವಳಿಯನ್ನು ಸೃಷ್ಟಿಸಿ ಸದರಿ ಜಮೀನನ್ನು ಮಾಜಿ ಸೈನಿಕರಿಗೆ ನಿವೇಶನಗಳನ್ನು ಮಂಜೂರು ಮಾಡಲು ಬೆಂಗಳೂರು ನಗರ ಜಿಲ್ಲಾಧಿಕಾರಿಗಳಿಗೆ ಶಿಫಾರಸ್ಸು ಮಾಡಿರುತ್ತಾರೆಂಬ ಆರೋಪದ ಬಗ್ಗೆ ಅಂದಿನ ಬೆಂಗಳೂರು ಉತ್ತರ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಯಾದ ಡಾ: ಎಂ.ಹೆಚ್. ತಿಪ್ಪೇಸ್ವಾಮಿ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಪ್ರಕರಣವನ್ನು ಕರ್ನಾಟಕ ನಾಗರೀಕ ಸೇವಾ (ವ, ನಿ & ಮೇ) ನಿಯಮಗಳು, 1957ರ ನಿಯಮ 14 (ಎ) ರನ್ವಯ ಲೋಕಾಯುಕ್ತರಿಗೆ ವಹಿಸುವಂತೆ ಕೋರಿರುತ್ತಾರೆ.

ಸದರಿ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಪ್ರಕರಣದಲ್ಲಿನ ಆಪಾದಿತರ ವಿರುದ್ಧದ ಆರೋಪಗಳು ಮೇಲ್ನೋಟಕ್ಕೆ ನೈಜವೆಂದು ಕಂಡು ಬಂದಿದ್ದರಿಂದ ಆರೋಪಗಳ ಬಗ್ಗೆ ಸತ್ಯಾ-ಸತ್ಯತೆಯನ್ನು ತಿಳಿಯುವ ಸಲುವಾಗಿ ಇಲಾಖಾ ವಿಚಾರಣೆ ಕೈಗೊಳ್ಳಲು ಪ್ರಕರಣವನ್ನು ಕರ್ನಾಟಕ ನಾಗರಿಕ ಸೇವಾ (ವ.ನಿ&ಮೇ) ನಿಯಮಾವಳಿಗಳು-1957ರ ನಿಯಮ-14ಎ ರನ್ವಯ ಮಾನ್ಯ ಉಪ ಲೋಕಾಯುಕ್ತರವರಿಗೆ ವಹಿಸಿ ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ಆದೇಶವನ್ನು ಹೊರಡಿಸಲಾಗಿರುತ್ತದೆ.

ಶ್ರೀ ಎಂ.ಹೆಚ್ ತಿಪ್ಪೇಸ್ವಾಮಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ ಇವರು ಸದರಿ ಸರ್ಕಾರದ ಆದೇಶವನ್ನು ಪ್ರಶ್ನಿಸಿ ಮಾನ್ಯ ಕರ್ನಾಟಕ ಆಡಳಿತ ನ್ಯಾಯಮಂಡಳಿಯಲ್ಲಿ ಅರ್ಜಿ ಸಂಖ್ಯೆ: 1856/2014ನ್ನು ದಾಖಲಿಸಿದ್ದರು. ಸದರಿ ಅರ್ಜಿಯ ವಿಚಾರಣೆ ನಡೆಸಿದ ಮಾನ್ಯ ನ್ಯಾಯಮಂಡಳಿಯು, "ಅರ್ಜಿದಾರರ ವಿರುದ್ಧ ಲೋಕಾಯುಕ್ತದಲ್ಲಿ ದಾಖಲಾಗಿರುವ ಪ್ರಕರಣದಲ್ಲಿನ ಆರೋಪಕ್ಕೆ ಸಂಬಂಧಿಸಿದಂತೆ ಈಗಾಗಲೇ ಸರ್ಕಾರದ ಹಂತದಲ್ಲಿ ಆಪಾದಿತ ಅಧಿಕಾರಿಗೆ ಕಾರಣ ಕೇಳುವ ನೋಟಿಸ್ ಜಾರಿ ಮಾಡಿ ಅವರಿಂದ ಲಿಖಿತ ಸಮಜಾಯಿಷಿ ಪಡೆದು ಪರಿಶೀಲಿಸಿ ಸದರಿಯವರಿಗೆ ದಿನಾಂಕ:01.01.2010ರಂದು ಎಚ್ಚರಿಕೆ ನೀಡಿ ಪ್ರಕರಣವನ್ನು ಮುಕ್ತಾಯಗೊಳಿಸಲಾಗಿದ್ದು, ಅದೇ ಆರೋಪಕ್ಕೆ ಸಂಬಂಧಿಸಿದಂತೆ ಇಲಾಖಾ ವಿಚಾರಣೆ ನಡೆಸಲು ಪ್ರಕರಣವನ್ನು 14 (ಎ) ರಡಿ ಲೋಕಾಯುಕ್ತ ಸಂಸ್ಥೆಗೆ ವಹಿಸಿರುವ ಸರ್ಕಾರದ ನಿರ್ಣಯವು ನಿಯಮಬದ್ಧವಾಗಿರುವುದಿಲ್ಲವೆಂದು" ತೀರ್ಮಾನಿಸಿ, ದಿನಾಂಕ: 20.03.2019ರಂದು ಈ ಕೆಳಕಂಡಂತೆ ಆದೇಶಿಸಿರುತ್ತದೆ.

i. *Application is allowed and Annexure-A12 dated 24.02.2014 stands quashed.*

ii. *In the light of quashing of order, pension and pensionary benefits of the applicant shall be settled, within four months from the date of receipt of a copy of this order.*

ಮಾನ್ಯ ನ್ಯಾಯಮಂಡಳಿಯ ಸದರಿ ಆದೇಶವನ್ನು ಪ್ರಶ್ನಿಸಿ ಲೋಕಾಯುಕ್ತ ಸಂಸ್ಥೆಯ ವತಿಯಿಂದ ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ರಿಟ್ ಅರ್ಜಿ ಸಂಖ್ಯೆ: 9467/2021ನ್ನು ದಾಖಲಿಸಿದ್ದು, ಸದರಿ ಅರ್ಜಿಯ ವಿಚಾರಣೆ ನಡೆಸಿರುವ ಮಾನ್ಯ ಉಚ್ಚ ನ್ಯಾಯಾಲಯವು ದಿನಾಂಕ: 29.06.2021ರ ಆದೇಶದಲ್ಲಿ ಕರ್ನಾಟಕ ಆಡಳಿತ ನ್ಯಾಯಮಂಡಳಿಯ ದಿನಾಂಕ:20.03.2019ರ ಆದೇಶವನ್ನು ಎತ್ತಿ ಹಿಡಿದು ಲೋಕಾಯುಕ್ತ ಸಂಸ್ಥೆಯಿಂದ ಸಲ್ಲಿಸಲಾಗಿದ್ದ ರಿಟ್ ಅರ್ಜಿಯನ್ನು ವಜಾಗೊಳಿಸಿ ಆದೇಶಿಸಿರುತ್ತದೆ.

ಮಾನ್ಯ ಉಚ್ಚ ನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ:9467/2021ರಲ್ಲಿ ದಿ:29.06.2021ರಂದು ನೀಡಿರುವ ಆದೇಶದಲ್ಲಿ ಕರ್ನಾಟಕ ಆಡಳಿತ ನ್ಯಾಯ ಮಂಡಳಿಯ ಅರ್ಜಿ ಸಂಖ್ಯೆ:1856/2014ರಲ್ಲಿನ ದಿ: 20.03.2019ರ ಆದೇಶವನ್ನು ಎತ್ತಿ ಹಿಡಿದು ಆದೇಶಿಸಿರುವುದರಿಂದ ಶ್ರೀ ಎಂ.ಹೆಚ್.ತಿಪ್ಪೇಸ್ವಾಮಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಬೆಂಗಳೂರು ಉತ್ತರ, ಬೆಂಗಳೂರು ನಗರ ಜಿಲ್ಲೆ ಪ್ರಸ್ತುತ ನಿವೃತ್ತ ಇವರ ವಿರುದ್ಧದ ಇಲಾಖಾ ವಿಚಾರಣೆ ನಡೆಸಲು ಪ್ರಕರಣವನ್ನು ಕರ್ನಾಟಕ ಲೋಕಾಯುಕ್ತರವರಿಗೆ ಕ.ನಾ.ಸೇ (ವ.ನಿ&ಮೇ) ನಿಯಮಗಳು 1957ರ ನಿಯಮ-14(ಎ)ರಡಿ ವಹಿಸಲಾಗಿದ್ದ ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 57 ವಿಸೇಬಿ 2014, ದಿನಾಂಕ:24.02.2014ನ್ನು ಹಿಂಪಡೆಯಲು ಸರ್ಕಾರವು ನಿರ್ಧರಿಸಿದೆ. ಅದರಂತೆ ಈ ಮುಂದಿನ ಆದೇಶ.

..3

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 02 ವಿಸೇಬಿ 2022, ದಿನಾಂಕ: 25.02.2022.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಶ್ರೀ ಎಂ.ಹೆಚ್.ತಿಪ್ಪೇಸ್ವಾಮಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ, ಬೆಂಗಳೂರು ಉತ್ತರ, ಬೆಂಗಳೂರು ನಗರ ಜಿಲ್ಲೆ ಪ್ರಸ್ತುತ ನಿವೃತ್ತ ಇವರ ವಿರುದ್ಧ ಇಲಾಖಾ ವಿಚಾರಣೆ ನಡೆಸಲು ಪ್ರಕರಣವನ್ನು ಕರ್ನಾಟಕ ನಾಗರೀಕ ಸೇವಾ (ವ.ನಿ&ಮೇ) ನಿಯಮಗಳು 1957ರ ನಿಯಮ–14(ಎ)ರಡಿ ಕರ್ನಾಟಕ ಲೋಕಾಯುಕ್ತ ಸಂಸ್ಥೆಗೆ ವಹಿಸಲಾಗಿದ್ದ **ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 57 ವಿಸೇಬಿ 2014, ದಿ:24.02.2014ನ್ನು ತಕ್ಷಣದಿಂದ ಜಾರಿಗೆ ಬರುವಂತೆ ಹಿಂಪಡೆದು** ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

25/02/2022
**(ಬಾಲಪ್ಪ)**
ಸರ್ಕಾರದ ಅಧೀನ ಕಾರ್ಯದರ್ಶಿ (ಸೇ–ಬಿ&ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

25/02/2022

**ಇವರಿಗೆ,**

1. ಮಹಾಲೇಖಪಾಲರು, (ಎ ಮತ್ತು ಇ), ಕರ್ನಾಟಕ, ಬೆಂಗಳೂರು.
2. ಮಾನ್ಯ ಉಪ ಲೋಕಾಯುಕ್ತ, ಕರ್ನಾಟಕ ಲೋಕಾಯುಕ್ತ, ಬಹುಮಹಡಿಗಳ ಕಟ್ಟಡ, ಬೆಂಗಳೂರು–01.
3. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬಹುಮಹಡಿಗಳ ಕಟ್ಟಡ, ಬೆಂಗಳೂರು–01.
4. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೆಂಗಳೂರು ನಗರ ಜಿಲ್ಲೆ.
5. ಆಪಾದಿತ ಅಧಿಕಾರಿಗಳು (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು ನಗರ ಇವರ ಮುಖಾಂತರ)
6. ಸರ್ಕಾರಿ ವಕೀಲರು, ಅಡ್ವೋಕೇಟ್ ಜನರಲ್‌ರವರ ಕಛೇರಿ, ಉಚ್ಛ ನ್ಯಾಯಾಲಯ ಕಟ್ಟಡ, ಬೆಂಗಳೂರು.
7. ಸರ್ಕಾರಿ ವಕೀಲರು, ಅಡ್ವೋಕೇಟ್ ಜನರಲ್‌ರವರ ಕಛೇರಿ, ಕರ್ನಾಟಕ ಆಡಳಿತ ನ್ಯಾಯಮಂಡಳಿ, ಕಂದಾಯ ಭವನ, ಬೆಂಗಳೂರು.
8. ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
9. ಮಾಹಿತಿ ಕೇಂದ್ರ/ಶಾಖಾ ರಕ್ಷಕ ಕಡತ/ಹೆಚ್ಚುವರಿ ಪ್ರತಿ.

**ಪ್ರತಿ ಮಾಹಿತಿಗಾಗಿ:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಉಪ ಕಾರ್ಯದರ್ಶಿ (ಆಡಳಿತ–2) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.

*****